Akashvani : Bangalore
Regional Bulletin In Kannada
06.04.2026 / 14.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಕಾಳಸಂತೆಯಲ್ಲಿ ಅಡುಗೆ ಅನಿಲ ಮಾರಾಟ ಮಾಡುವವರ ವಿರುದ್ಧ ಕಠಿಣ ಕ್ರಮ- ಗೃಹ ಸಚಿವ ಡಾ.ಜಿ.ಪರಮೇಶ್ವರ್ ಎಚ್ಚರಿಕೆ

೨. ದಾವಣಗೆರೆ ದಕ್ಷಿಣ, ಬಾಗಲಕೋಟೆಯಲ್ಲಿ ಬಿರುಸುಗೊಂಡ ಚುನಾವಣಾ ಪ್ರಚಾರ; ಪ್ರಮುಖ ರಾಜಕೀಯ ಪಕ್ಷಗಳ ನಾಯಕರಿಂದ ಮತಯಾಚನೆ

೩. ಕಟ್ಟಕಡೆಯ ವ್ಯಕ್ತಿಗೂ ನ್ಯಾಯ ಒದಗಿಸುವುದು ಪಕ್ಷದ ಗುರಿ- ಬಿಜೆಪಿ ಸಂಸ್ಥಾಪನಾ ದಿನಾಚರಣೆಯಲ್ಲಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅಭಿಮತ

೪. ಬಸವ ಕಲ್ಯಾಣದಲ್ಲಿ ೭೪೨ ಕೋಟಿ ರೂಪಾಯಿ ವೆಚ್ಚದಲ್ಲಿ ಅನುಭವ ಮಂಟಪ ನಿರ್ಮಾಣ- ಸಚಿವ ಈಶ್ವರ್ ಬಿ ಖಂಡ್ರೆ ಸ್ಪಷ್ಟನೆ

೫. ರಾಜ್ಯದ ಹಲವೆಡೆ ಇಂದು ಗುಡುಗು ಸಹಿತ ಆಲಿಕಲ್ಲು ಮಳೆ ಸಾಧ್ಯತೆ- ಹವಾಮಾನ ಇಲಾಖೆ ಮುನ್ನೆಚ್ಚರಿಕೆ

<><*<><>*><>

ಕಾಳಸಂತೆಯಲ್ಲಿ ಅಡುಗೆ ಅನಿಲ ಮಾರಾಟ ಮಾಡುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಗೃಹ ಸಚಿವ ಡಾ ಜಿ ಪರಮೇಶ್ವರ್ ಎಚ್ಚರಿಕೆ ನೀಡಿದ್ದಾರೆ. ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪೊಲೀಸರು ಸ್ವಯಂ ಪ್ರೇರಿತರಾಗಿ ಸುಮೋಟೊ ಕೇಸ್ ದಾಖಲಿಸಲು ಸಾಧ್ಯವಿಲ್ಲ, ಆದರೆ, ಆಹಾರ ಇಲಾಖೆಗೆ ದೂರು ಬಂದಾಗ ಪೊಲೀಸ್ ಇಲಾಖೆಗೆ ಮಾಹಿತಿ ನೀಡಿದರೆ, ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ. ರಾಜ್ಯದ ಹಲವಾರು ಕಡೆಗಳಲ್ಲಿ ಅಕ್ರಮವಾಗಿ ಇಟ್ಟಿರುವ ಸಿಲಿಂಡರ್‌ಗಳನ್ನು ಜಪ್ತಿ ಮಾಡಲಾಗಿದೆ ಎಂದು ಹೇಳಿದ್ದಾರೆ. ಬಾಗಲಕೋಟೆ, ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಗಳಲ್ಲಿ ನಮ್ಮ ಪಕ್ಷದ ಅಭ್ಯರ್ಥಿಗಳು ಜಯ ಗಳಿಸಲಿದ್ದಾರೆ ಎಂದು ಅವರು ತಿಳಿಸಿದರು.

ಧ್ವನಿ: ಡಾ.ಜಿ.ಪರಮೇಶ್ವರ್ ( ೨೭ ಸೆಕೆಂಡ್ಸ್ )

<><*<><>*><>

ವಿಧಾನಸಭಾ ಉಪಚುನಾವಣೆ ನಡೆಯುವ ದಾವಣಗೆರೆ ದಕ್ಷಿಣ ಹಾಗೂ ಬಾಗಲಕೋಟೆ ಜಿಲ್ಲೆಗಳಲ್ಲಿ ಪ್ರಚಾರ ಬಿರುಸುಗೊಂಡಿದೆ. ಬಹಿರಂಗ ಪ್ರಚಾರಕ್ಕೆ ನಾಳೆ ತೆರೆ ಬೀಳಲಿದೆ. ದಾವಣಗೆರೆಯಲ್ಲಿ ಚುನಾವಣಾ ಪ್ರಚಾರ ಬಿರುಸುಗೊಂಡಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಮಲ್ಲಿಕಾರ್ಜುನ್ ಪರ ಚುನಾವಣಾ ಪ್ರಚಾರ ನಡೆಸಿದರು. ಇನ್ನೊಂದೆಡೆ ಬಿಜೆಪಿ ಅಭ್ಯರ್ಥಿ ಶ್ರೀನಿವಾಸ ದಾಸ ಕರಿಯಪ್ಪ ಪರ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸೇರಿದಂತೆ ಹಲವು ನಾಯಕರು ಮತಯಾಚಿಸಿದರು.

<><*<><>*><>

ಬಾಗಲಕೋಟೆಯಲ್ಲೂ ಉಪಚುನಾವಣೆ ಪ್ರಚಾರ ಬಿರುಸುಗೊಂಡಿದೆ. ಇಂದು ಬಮ್ಮಂಗಿ ಗ್ರಾಮದಲ್ಲಿ ಬಿಜೆಪಿ ಅಭ್ಯರ್ಥಿ ವೀರಣ್ಣ ಚರಂತಿಮಠ ಪರ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯುಡಿಯೂರಪ್ಪ ಹಾಗೂ ಸಂಸದ ಬಸವರಾಜ ಬೊಮ್ಮಾಯಿ, ಬಿಜೆಪಿ ಮುಖಂಡ ಶ್ರೀರಾಮುಲು ಮತಯಾಚಿಸಿದರು. ಈ ವೇಳೆ ಮಾತನಾಡಿದ ಸಂಸದ ಬಸವರಾಜ ಬೊಮ್ಮಾಯಿ, ರಾಜ್ಯ ಸರ್ಕಾರ ಹಿಂದುಳಿದ ವರ್ಗಗಳ ಹಾಗೂ ಪರಿಶಿಷ್ಟರ ವಿರೋಧಿ ಸರ್ಕಾರ ಎಂದು ಟೀಕಿಸಿದ್ದಾರೆ. ಬಿಜೆಪಿ ಅಭ್ಯರ್ಥಿಯನ್ನು ಗೆಲ್ಲಿಸುವಂತೆ ಅವರು ಮನವಿ ಮಾಡಿದ್ದಾರೆ. ಪರಿಶಿಷ್ಟರಲ್ಲಿ ನ್ಯಾಯ ಒದಗಿಸಲು ಪ್ರಮಾಣಿಕ ಪ್ರಯತ್ನ ಮಾಡುವುದಾಗಿ ಅವರು ಭರವಸೆ ನೀಡಿದ್ದಾರೆ. ಇನ್ನೊಂದೆಡೆ ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಪರ ಸಚಿವ ಜಮೀರ್ ಅಹಮ್ಮದ್ ಸೇರಿದಂತೆ ಹಲವು ಸಚಿವರು ಮತಯಾಚಿಸಿದ್ದಾರೆ.

<><*<><>*><>

ಹಾವೇರಿ ವಿಶ್ವವಿದ್ಯಾಲಯದ ಮೊದಲ ಘಟಿಕೋತ್ಸವ ಸಮಾರಂಭವನ್ನು ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, ಜೀವನದಲ್ಲಿ ಕಲಿಕೆ ಎಂಬುದು ನಿರಂತರ ಪ್ರಕ್ರಿಯೆ. ಸಫಲತೆ ಎಂಬುವುದು ಜೀವನದಲ್ಲಿ ನಾವು ಎಷ್ಟು ಎತ್ತರಕ್ಕೆ ಬೆಳೆದಿದ್ದೇವೆ ಎಂಬುವುದಲ್ಲ. ಬದಲಾಗಿ ನಾವು ಎಷ್ಟು ಸಕಾರಾತ್ಮಕ ಬದಲಾವಣೆಗಳನ್ನು ತಂದಿದ್ದೇವೆ ಎನ್ನುವುದರ ಮೇಲೆ ನಿರ್ಧರವಾಗುತ್ತದೆ ಎಂದು ಅಭಿಪ್ರಯಪಟ್ಟಿದ್ದಾರೆ.

ಧ್ವನಿ: ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ( ೨೦ ಸೆಕೆಂಡ್ಸ್)

ಕಾರ್ಯಕ್ರಮದಲ್ಲಿ ಶೈಕ್ಷಣಿಕ ವರ್ಷದಲ್ಲಿ ಉತ್ತಮ ಸಾಧನೆ ಮಾಡಿದ ಸ್ನಾತಕೋತ್ತರ, ಬಿ.ಎಡ್ ಮತ್ತು ಬಿಪಿ.ಎಡ್ ಪದವಿಯಲ್ಲಿ ರ್‍ಯಾಂಕ್ ಪಡೆದ ೮ ವಿದ್ಯಾರ್ಥಿಗಳಿಗೆ ಚಿನ್ನದ ಪದಕ ಹಾಗೂ ಹತ್ತು ವಿದ್ಯಾರ್ಥಿಗಳಿಗೆ ರಾಜ್ಯಪಾಲರು ನಗದು ಪುರಸ್ಕಾರ ನೀಡಿ ಪ್ರೋತ್ಸಾಹಿಸಿದರು. ಕರ್ನಾಟಕ ಕಾನೂನು ಆಯೋಗದ ಅಧ್ಯಕ್ಷ ಅಶೋಕ ಹಿಂಚಿಗೇರಿ ಘಟಿಕೋತ್ಸವದ ಭಾಷಣ ಮಾಡಿದರು. ವಿಶ್ವವಿದ್ಯಾಲಯದ ಕುಲಪತಿ ಸುರೇಶ್ ಜಂಗಮಶೆಟ್ಟಿ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

<><*<><>*><>

ಹಿರಿಯ ನಾಯಕರ ತಪಸ್ಸು ಹಾಗೂ ಕೋಟ್ಯಂತರ ಕಾರ್ಯಕರ್ತರ ಪರಿಶ್ರಮದಿಂದ ಬಿಜೆಪಿ ಇಂದು ದೇಶದ ಅತಿ ದೊಡ್ಡ ಪಕ್ಷವಾಗಿ ಬೆಳೆದು ನಿಂತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅಭಿಪ್ರಾಯಪಟ್ಟಿದ್ದಾರೆ. ದಾವಣಗೆರೆ ಜಿಲ್ಲಾ ಬಿಜೆಪಿ ಕಚೇರಿಯಲ್ಲಿಂದು ನಡೆದ ಬಿಜೆಪಿ ಸಂಸ್ಥಾಪನಾ ದಿನಾಚರಣೆಯಲ್ಲಿ ಮಾತನಾಡಿದ ಅವರು, 'ದೇಶ ಮೊದಲು' ಎಂಬ ಮಂತ್ರದೊಂದಿಗೆ ಸಮಾಜದ ಕಟ್ಟಕಡೆಯ ವ್ಯಕ್ತಿಗೂ ನ್ಯಾಯ ಒದಗಿಸುವುದು ಪಕ್ಷದ ಗುರಿಯಾಗಿದೆ  ಎಂದು ತಿಳಿಸಿದ್ದಾರೆ. ಅಟಲ್ ಬಿಹಾರಿ ವಾಜಪೇಯಿ, ಲಾಲ್ ಕೃಷ್ಣ ಅಡ್ವಾಣಿ, ಯಡಿಯೂರಪ್ಪ, ಅನಂತಕುಮಾರ್ ಸೇರಿದಂತೆ ಅನೇಕ ಹಿರಿಯರ ತ್ಯಾಗದಿಂದ ಪಕ್ಷವು ಇಂದು ಹಳ್ಳಿ ಹಳ್ಳಿಗೂ ತಲುಪಿದೆ ಎಂದು ಹೇಳಿದ್ದಾರೆ.

<><*<><>*><>

ವಚನಕಾರರ ವಿಚಾರಧಾರೆ, ಸಾಮಾಜಿಕ ಮೌಲ್ಯಗಳನ್ನು ಜನರಿಗೆ ಮುಟ್ಟಿಸುವ ನಿಟ್ಟಿನಲ್ಲಿ ಬೀದರ್ ಜಿಲ್ಲೆಯ ಬಸವ ಕಲ್ಯಾಣದಲ್ಲಿ ೭೪೨ ಕೋಟಿ ರೂಪಾಯಿ ವೆಚ್ಚದಲ್ಲಿ ಅನುಭವ ಮಂಟಪ ನಿರ್ಮಾಣವಾಗಲಿದೆ ಎಂದು ಅರಣ್ಯ ಸಚಿವ ಹಾಗೂ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷ ಈಶ್ವರ ಬಿ. ಖಂಡ್ರೆ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದ ಆವರಣದಲ್ಲಿ ಜಗಜ್ಯೋತಿ ಬಸವೇಶ್ವರರ ಪುತ್ಥಳಿ ಲೋಕಾರ್ಪಣೆ ಸಮಾರಂಭದಲ್ಲಿ ಮಾತನಾಡಿದ ಅವರು, ೨೮೦ ಕೋಟಿ ರೂಪಾಯಿ ಕಾಮಗಾರಿಗಳು ಈಗಾಗಲೇ ನಡೆದಿವೆ. ಮುಂದಿನ ಬಸವ ಜಯಂತಿ ವೇಳೆಗೆ ಅನುಭವ ಮಂಟಪ ಲೋಕಾರ್ಪಣೆಗೊಳ್ಳುವ ವಿಶ್ವಾಸವಿದೆ ಎಂದು ಹೇಳಿದ್ದಾರೆ.  ಅನುಭವ ಮಂಟಪದ ೭೭೦ ಕಂಬಗಳ ಮೇಲೆ, ವಚನಗಳನ್ನು ಕೆತ್ತಿಸಲಾಗುತ್ತಿದ್ದು, ಶರಣರ ಕಿರು ಚಿತ್ರಗಳನ್ನು ನಿರ್ಮಾಣ ಮಾಡಲಾಗುತ್ತಿದೆ. ಇದೊಂದು ಜಾಗತಿಕ ಸ್ಮಾರಕವಾಗಿ ಗಮನ ಸೆಳೆಯಲಿದೆ ಎಂದು ತಿಳಿಸಿದ್ದಾರೆ. ದೇವನಹಳ್ಳಿಯ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ರಸ್ತೆ ಬಳಿಯೂ ಬಸವೇಶ್ವರ ಪ್ರತಿಮೆ ಅನಾವರಣಗೊಳಿಸಲಾಗುವುದು ಎಂದು ಅವರು ಸ್ಪಷ್ಟಪಡಿಸಿದ್ದಾರೆ.

<><*<><>*><>

ಬೆಂಗಳೂರು - ಹೊಸೂರು - ಕೃಷ್ಣಗಿರಿ ಹೆದ್ದಾರಿಯಲ್ಲಿನ ಅತಿಯಾದ ಸಂಚಾರ ದಟ್ಟಣೆ ನಿಯಂತ್ರಿಸಲು ಮತ್ತು ದಕ್ಷಿಣದ ಜಿಲ್ಲೆಗಳ ನಡುವೆ ಸುಗಮ ಸಂಚಾರ ಕಲ್ಪಿಸಲು ರಾಷ್ಟ್ರೀಯ ಹೆದ್ದಾರಿ ವತಿಯಿಂದ ನಿರ್ಮಿಸಲು ಉದ್ದೇಶಿಸಿರುವ ಎಸ್.ಟಿ.ಆರ್.ಆರ್ - ಕುಪ್ಪಂ ಗ್ರೀನ್ ಫೀಲ್ಡ್ ಹೆದ್ದಾರಿ ಯೋಜನೆಯ ಕುರಿತು ಇಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಹತ್ವದ ಸಮಾಲೋಚನಾ ಸಭೆ ನಡೆಯಿತು. ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಅಧ್ಯಕ್ಷತೆಯಲ್ಲಿ ನಡೆದ ಈ ಸಭೆಯಲ್ಲಿ ರಾಷ್ಟ್ರೀಯ ಹೆದ್ದಾರಿ ಅಧಿಕಾರಿಗಳು ಯೋಜನೆಯ ನೀಲನಕ್ಷೆ ಮತ್ತು ಉದ್ದೇಶಿತ ಮಾರ್ಗಗಳ ಬಗ್ಗೆ ವಿವರವಾದ ಮಾಹಿತಿ ನೀಡಿದರು. ಪ್ರಸ್ತುತ ನಿರ್ಮಾಣ ಹಂತದಲ್ಲಿರುವ ಬೆಂಗಳೂರು ಸುತ್ತಮುತ್ತಲಿನ ಉಪನಗರ ವರ್ತುಲ ರಸ್ತೆಯನ್ನು ಆಂಧ್ರಪ್ರದೇಶದ ಕುಪ್ಪಂ ಬಳಿಯ

ಎನ್.ಹೆಚ್-೪೨ ಕ್ಕೆ ಈ ಹೊಸ ಹೆದ್ದಾರಿ ಸಂಪರ್ಕಿಸಲಿದೆ. ಒಟ್ಟು ೫೩ ಕಿಲೋಮೀಟರ್ ಉದ್ದದ ಈ ಯೋಜನೆಯಲ್ಲಿ ಸುಮಾರು ೩೫ ಕಿಲೋಮೀಟರ್ ರಸ್ತೆ ಕೋಲಾರ ಜಿಲ್ಲೆಯ ಮೂಲಕ ಹಾದುಹೋಗಲಿದೆ.

<><*<><>*><>

ಎರಡು ಒಲಿಂಪಿಕ್ ಪದಕ ವಿಜೇತೆ ಮತ್ತು ಎರಡು ಬಾರಿ ವಿಶ್ವ ಚಾಂಪಿಯನ್‌ಯಾಗಿರುವ ಬ್ಲಾಂಕಾ ವ್ಲಾಸಿಕ್ ಅವರನ್ನು ಇದೇ ೨೬ ರಂದು ನಡೆಯಲಿರುವ ವರ್ಲ್ಡ್ ೧೦-ಕೆ ಬೆಂಗಳೂರು ೨೦೨೬ರ ಅಂತಾರಾಷ್ಟ್ರೀಯ ರಾಯಭಾರಿಯನ್ನಾಗಿ ನೇಮಿಸಲಾಗಿದೆ. ಕ್ರೊಯೇಷಿಯಾದ ಅಥ್ಲಿಟ್ ವ್ಲಾಸಿಕ್ ೨೦೨೪ರ ಬೀಜಿಂಗ್ ಒಲಿಂಪಿಕ್‌ನಲ್ಲಿ ಬೆಳ್ಳಿ ಹಾಗೂ ೨೦೧೬ ರ ರಿಯೊ ಒಲಿಂಪಿಕ್ಸ್‌ನಲ್ಲಿ ಕಂಚಿನ ಪದಕ ಗೆದ್ದಿದ್ದಾರೆ. ಆಯ್ಕೆಯ ಕುರಿತಂತೆ ಪ್ರತಿಕ್ರಿಯಿಸಿರುವ ವ್ಲಾಸಿಕ್, ಬೆಂಗಳೂರಿಗರ ಉತ್ಸಾಹ ಹಾಗೂ ಬೆಂಗಳೂರಿನಲ್ಲಿರುವ ಪ್ರತಿಯೊಬ್ಬರನ್ನು ನೋಡಲು ಕಾತರದಿಂದ ಕಾಯುತ್ತಿರುವುದಾಗಿ ತಿಳಿಸಿದ್ದಾರೆ.

<><*<><>*><>

ದೇಶದ ಹಲವೆಡೆ ಇಂದು ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ. ಮುಂದಿನ ಐದು ದಿನಗಳ ಕಾಲ ರಾಜ್ಯದ ಹಲವಡೆ ಗುಡುಗು ಸಹಿತ ಆಲಿಕಲ್ಲು ಮಳೆಯಾಗುವ ಸಾಧ್ಯತೆಯಿದೆ. ಮುಂಜಾಗ್ರತಾ ಕ್ರಮವಾಗಿ ೧೬ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.  ಗಂಟೆಗೆ ೩೦ ರಿಂದ ೫೦ ಕಿಲೋಮೀಟರ್ ವೇಗದಲ್ಲಿ ಬಲವಾದ ಗಾಳಿ ಬೀಸುವ ಸಾಧ್ಯತೆಯಿದೆ. ರಾಜ್ಯದ ಹಲವೆಡೆ ಗುಡುಗು, ಮಿಂಚಿನಿಂದ ಕೂಡಿದ ಮಳೆಯಾಗುವ ನಿರೀಕ್ಷೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ  <>*><>